# ಕರ್ನಾಟಕ ವಿಧಾನಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 495 |
| ಮಾನ್ಯ ಸದಸ್ಯರ ಹೆಸರು | ಡಾ|| ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 14/08/2025 |
| ಉತ್ತರಿಸುವ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಎಷ್ಟು ಜನ ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ವಿತರಿಸಲಾಗಿದೆ; | ಜುಲೈ 1, 2025ರ ಪತ್ರಿಕಾ ದಿನಾಚರಣೆ ದಿನದಂದು ಮಾನ್ಯ ಮುಖ್ಯಮಂತ್ರಿಗಳು ಸಾಂಕೇತಿಕವಾಗಿ ಕಲ್ಯಾಣ ಕರ್ನಾಟಕ ಭಾಗದ ಮೂವರು ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಗಳನ್ನು ವಿತರಿಸಿದ್ದು, ಉಳಿದಂತೆ ಸೇವಾಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಅವುಗಳನ್ನು ಪರಿಶೀಲಿಸಿ, ಅರ್ಹ ಗ್ರಾಮೀಣ ಪತ್ರಕರ್ತರಿಗೆ ಮಾತ್ರ ಬಸ್ ಪಾಸ್ ವಿತರಿಸಲು ಕ್ರಮ ವಹಿಸಲಾಗುತ್ತಿದೆ. |
| ಆ) | ಸರ್ಕಾರ ವಿಧಿಸಿರುವ ಕೆಲ ಷರತ್ತು ಸಡಿಲಗೊಳಿಸಲು ಸಂಬಂಧ ದೂರುಗಳು ಬಂದಿವೆಯೇ? | ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ಪಾಸ್ ವಿತರಿಸುವ ಯೋಜನೆಯ ನಿಯಮಗಳನ್ನು ಸರಳೀಕರಣಗೊಳಿಸುವಂತೆ ಕೋರಿ ಮನವಿ ಗಳು ಸ್ವೀಕೃತವಾಗಿದ್ದು, ಅವುಗಳನ್ನು ಪರಿಶೀಲಿಸಿ, ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್‌ಪಾಸ್ ವಿತರಿಸುವ ಯೋಜನೆಯ ಸೌಲಭ್ಯವನ್ನು ಗರಿಷ್ಠ ಸಂಖ್ಯೆಯ ಪತ್ರಕರ್ತರು ಪಡೆದುಕೊಳ್ಳಲು ಅನುವಾಗುವಂತೆ, ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಿರುವ ಸರ್ಕಾರದ ಆದೇಶ ಸಂಖ್ಯೆ :ಕೆಸಿಐ/ವಿಪಿಪಿ/6/2024, ದಿನಾಂಕ: 26-09-2024ರಲ್ಲಿನ ಕೆಲವೊಂದು ನಿಯಮಗಳಿಗೆ ತಿದ್ದುಪಡಿ/ಸೇರ್ಪಡೆ ಮಾಡಿ ದಿನಾಂಕ: 30/6/2025ರಂದು ಆದೇಶ ಹೊರಡಿಸಲಾಗಿದೆ. |

**ಸಂ: ಕೆಸಿಐ-ಪಿಐಪಿ/199/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ